**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ:ಸಿ7[4]ಪ್ರಾ.ಶಿ.ಅನು.ಹೆ.ಶಿ./01/2011-12 ದಿನಾಂಕ:11ನೇ ಆಗಸ್ಟ್ 2011

**: ಜ್ಞಾ ಪ ನ :**

**ವಿಷಯ:**-ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿನ ಹೆಚ್ಚುವರಿ ಶಿಕ್ಷಕರನ್ನು ಗುರ್ತಿಸುವ ಮತ್ತು ಮರುಹಂಚಿಕೆ ಮಾಡುವ ಬಗ್ಗೆ.

**ಉಲ್ಲೇಖ:**-ಈ ಕಛೇರಿ ಸುತ್ತೋಲೆಯ ಸಮ ಸಂಖ್ಯೆ ದಿನಾಂಕ:20.07.2011 ಮತ್ತು 29.07.2011.

ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಹೆಚ್ಚುವರಿ ಶಿಕ್ಷಕರನ್ನು ಮತ್ತು ಖಾಲಿ ಹುದ್ದೆಗಳನ್ನು ಗುರ್ತಿಸಿ, ಸ್ಥಳಾಂತರಿಸುವ ಸಂಬಂಧ ವೇಳಾಪಟ್ಟಿ ನಿಗದಿಪಡಿಸಿ, ಅದರಂತೆ ಕ್ರಮ ಕೈಗೊಂಡು ವರದಿ ಸಲ್ಲಿಸಲು ಉಲ್ಲೇಖಿತ ಸುತ್ತೋಲೆಯಲ್ಲಿ ಸೂಚಿಸಲಾಗಿತ್ತು. ದಿನಾಂಕ:29/07/2011 ರಂದು ಈ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿತ್ತು. ಮುಂದುವರೆದು ಹೆಚ್ಚುವರಿ ಶಿಕ್ಷಕರ ಪ್ರಕ್ರಿಯೆಯನ್ನು ಜಿಲ್ಲಾ, ವಿಭಾಗ ಮತ್ತು ರಾಜ್ಯ ಮಟ್ಟದಲ್ಲಿ ನಡೆಸಲು ದಿನಾಂಕ:31.03.2011ರ ಸರ್ಕಾರದ ಆದೇಶದಲ್ಲಿ ಸೂಚಿಸಿರುವುದರಿಂದ ಅದರಂತೆ ಹೆಚ್ಚುವರಿ ಶಿಕ್ಷಕರ ಮರುಹೊಂದಾಣಿಕೆ ಮಾಡುವ ಕಾರ್ಯದ ದಿನಾಂಕವನ್ನು ಈ ಕೆಳಕಂಡಂತೆ ಪರಿಷ್ಕರಿಸಿದೆ.

| ಕ.ಸಂ | ಹೆಚ್ಚುವರಿ ಶಿಕ್ಷಕರ ಸ್ಥಳಾಂತರಿಸುವ ಚಟುವಟಿಕೆ | ದಿನಾಂಕ |
|---|---|---|
| 01. | ಜಿಲ್ಲಾ ಹಂತದಲ್ಲಿ ಹೆಚ್ಚುವರಿ ಶಿಕ್ಷಕರ, ಹೆಚ್ಚುವರಿ ಖಾಲಿ ಹುದ್ದೆಗಳ ವಿವರವನ್ನು ಪ್ರಕಟಿಸುವುದು. | 12.08.2011 |
| 02. | ಜಿಲ್ಲೆಯಲ್ಲಿ ಹೆಚ್ಚುವರಿ ಶಿಕ್ಷಕರ ಆಕ್ಷೇಪಣೆಗಳನ್ನು ಸ್ವೀಕರಿಸುವ ಅಂತಿಮ ದಿನಾಂಕ | 19.08.2011 |
| 03. | ಜಿಲ್ಲಾ ಹಂತದಲ್ಲಿ ಆಕ್ಷೇಪಣೆಗಳನ್ನು ಪರಿಶೀಲಿಸಿ ಹೆಚ್ಚುವರಿ ಶಿಕ್ಷಕರ ಅಂತಿಮ ಪಟ್ಟಿ ಪ್ರಕಟಿಸುವ ದಿನಾಂಕ | 22.08.2011 |
| 04. | ಹೆಚ್ಚುವರಿ ಶಿಕ್ಷಕರಿಗೆ ಜಿಲ್ಲಾ ಹಂತದಲ್ಲಿ ಕೌನ್ಸಿಲಿಂಗ್ ನಡೆಸಿ ಸ್ಥಳಾಂತರಿಸುವ ಆದೇಶ ನೀಡುವ ದಿನಾಂಕ | 25.08.2011 |
| 05. | ಉಪ ನಿರ್ದೇಶಕರ ಹಂತದಲ್ಲಿ ಕೌನ್ಸಿಲಿಂಗ್ ನಂತರ ಉಳಿದಿರುವ ಖಾಲಿ ಹುದ್ದೆ ಮತ್ತು ಹೆಚ್ಚುವರಿ ಶಿಕ್ಷಕರ ಪಟ್ಟಿಯನ್ನು ನಮೂನೆ-1,2,3 ನಲ್ಲಿ ನಿರ್ದೇಶಕರು(ಪ್ರಾಥಮಿಕ ಶಿಕ್ಷಣ) ಇವರ ಕಛೇರಿಗೆ ನೀಡುವ ಅಂತಿಮ ದಿನಾಂಕ | 27.08.2011 |
| 06. | ನಿರ್ದೇಶಕರ ಹಂತದಲ್ಲಿ ಖಾಲಿ ಹುದ್ದೆ ಮಾಹಿತಿ ಹಾಗೂ ಹೆಚ್ಚುವರಿ ಶಿಕ್ಷಕರ ಪಟ್ಟಿ ಪ್ರಕಟಿಸುವ ದಿನಾಂಕ | 29.08.2011 |
| 07. | ನಿರ್ದೇಶಕರು(ಪ್ರಾಥಮಿಕ ಶಿಕ್ಷಣ), ಬೆಂಗಳೂರು ರವರು ರಾಜ್ಯ ಮಟ್ಟದಲ್ಲಿ ಕೌನ್ಸಿಲಿಂಗ್ ನಡೆಸುವ ದಿನಾಂಕ | 30.08.2011 |

ಈ ಕಛೇರಿಯ ಪತ್ರ ಸಮ ಸಂಖ್ಯೆ ದಿನಾಂಕ:20.07.2011 ರಂದು ನೀಡಿರುವ ನಿರ್ದೇಶನದಂತೆ, ಹೆಚ್ಚುವರಿ ಶಿಕ್ಷಕರನ್ನು ಗುರ್ತಿಸುವುದು ಹಾಗೂ ಅವರನ್ನು ಅವಶ್ಯಕತೆ ಇರುವ ಶಾಲೆಗಳಿಗೆ ಸ್ಥಳಾಂತರಿಸುವ ಪ್ರಕ್ರಿಯೆ ಜಾರಿಗೊಳಿಸುವ ಕಾರ್ಯವನ್ನು ಮೇಲ್ಕಂಡ ವೇಳಾಪಟ್ಟಿಯಂತೆ ಸಕಾಲದಲ್ಲಿ ಅನುಷ್ಠಾನಗೊಳಿಸಲು ಸೂಚಿಸಿದೆ. ಇದೊಂದು ಸಮಯ ಸೀಮಿತ ಕಾರ್ಯಕ್ರಮವೆಂದು ಭಾವಿಸುವುದು.

**ನಿರ್ದೇಶಕರು [ಪ್ರಾಥಮಿಕ ಶಿಕ್ಷಣ]**

**ಇವರಿಗೆ:**

*01.* ಅಪರ ಆಯುಕ್ತರು, ಸಾ.ಶಿ.ಇಲಾಖೆ, ಧಾರವಾಡ ಮತ್ತು ಗುಲ್ಬರ್ಗಾ ವಿಭಾಗ ರವರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

*02.* ರಾಜ್ಯದ ಎಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು[ಆಡಳಿತ] ಇವರಿಗೆ ಅಗತ್ಯ ಕ್ರಮಕ್ಕಾಗಿ.

*03.* ಕಛೇರಿ ಪ್ರತಿ.

DNR\\3-server\Typing3\D\GIA_Pry\1470-11.doc